**ವಿಧಾನ ಸಭಾ ಸದಸ್ಯರಾದ ಶ್ರೀ ಸುರೇಶ್ ಬಾಬು ಸಿ.ಬಿ. (ಚಿಕ್ಕನಾಯಕನಹಳ್ಳಿ) ಇವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ 295ಕ್ಕೆ ಉತ್ತರ**

<table>
<tr><th>ಕ್ರ.ಸಂ.</th><th>ಪ್ರಶ್ನೆ</th><th>ಉತ್ತರ</th><th></th></tr>
<tr><td>ಅ)</td><td>ಕಳೆದ ಮೂರು ವರ್ಷಗಳಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ವಿವಿಧ ಸಂಘ/ಸಂಸ್ಥೆಗಳಿಗೆ ವಿದ್ಯಾರ್ಥಿ ನಿಲಯ ಕಟ್ಟಡ ನಿರ್ಮಾಣಕ್ಕೆ ನೀಡಲಾದ ಸಹಾಯಧನ ಎಷ್ಟು; (ಜಿಲ್ಲಾವಾರು, ಸಂಘ/ಸಂಸ್ಥೆಗಳವಾರು ಮಾಹಿತಿ ನೀಡುವುದು).</td><td>ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ವಿವಿಧ ಸಮುದಾಯಗಳ ಅಭಿವೃದ್ಧಿ ಕಾರ್ಯಕ್ರಮದಡಿ ಕಳೆದ ಮೂರು ವರ್ಷಗಳಲ್ಲಿ ಹಿಂದುಳಿದ ವರ್ಗಗಳ ಸಂಘ-ಸಂಸ್ಥೆಗಳಿಗೆ ವಿದ್ಯಾರ್ಥಿ ನಿಲಯ ಕಟ್ಟಡಗಳ ನಿರ್ಮಾಣಕ್ಕೆ ಮಂಜೂರು ಮಾಡಲಾದ ಅನುದಾನದ ವಿವರಗಳ ಈ ಕೆಳಕಂಡಂತಿವೆ.
<table>
<tr><th>ಕ್ರಸಂ</th><th>ವರ್ಷ</th><th>ಸಂಘ/ ಸಂಸ್ಥೆಗಳ ಸಂಖ್ಯೆ</th><th>ಮಂಜೂರು ಮಾಡಿರುವ ಮೊತ್ತ (ರೂ ಲಕ್ಷಗಳಲ್ಲಿ)</th><th>ಬಿಡುಗಡೆ ಮಾಡಿರುವ ಮೊತ್ತ (ರೂ ಲಕ್ಷಗಳಲ್ಲಿ)</th></tr>
<tr><td>01</td><td>2013-14</td><td>31</td><td>1520.00</td><td>1440.00</td></tr>
<tr><td>02</td><td>2014-15</td><td>32</td><td>1305.00</td><td>707.50</td></tr>
<tr><td>03</td><td>2015-16</td><td>37</td><td>1656.15</td><td>877.40</td></tr>
</table>
ಕಳೆದ ಮೂರು 3 ವರ್ಷಗಳಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಸಂಘ-ಸಂಸ್ಥೆಗಳಿಗೆ ವಿದ್ಯಾರ್ಥಿನಿಲಯ ಕಟ್ಟಡಗಳ ನಿರ್ಮಾಣಕ್ಕೆ ಬಿಡುಗಡೆ ಮಾಡಲಾದ ಅನುದಾನದ ವಿವರಗಳನ್ನು ಅನುಬಂಧ-1ರಲ್ಲಿ ಒದಗಿಸಲಾಗಿದೆ.</td><td>The Grant sanctioned under "Vividha Samudhayagala abhivruddi" through Backward Classes Welfare Department in last 3 years is as follows.
<table>
<tr><th>Sl.No</th><th>year</th><th>No of associations</th><th>Sanctioned Amount (in Lakhs)</th><th>Released Amount (in Lakhs)</th></tr>
<tr><td>01</td><td>2013-14</td><td>31</td><td>1520.00</td><td>1440.00</td></tr>
<tr><td>02</td><td>2014-15</td><td>32</td><td>1305.00</td><td>707.50</td></tr>
<tr><td>03</td><td>2015-16</td><td>37</td><td>1656.15</td><td>877.40</td></tr>
</table>
Details about the amount released to various Backward Classes association for the past three years enclosed in Annexure-1</td></tr>
<tr><td>ಆ)</td><td>ಈ ಸಂಘ-ಸಂಸ್ಥೆಗಳ ವಿದ್ಯಾರ್ಥಿ ನಿಲಯಗಳಲ್ಲಿ ಇರುವ ಒಟ್ಟು ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ಮತ್ತು ಆಯಾ ಸಂಘ/ಸಂಸ್ಥೆ ಯಾವ ಸಮುದಾಯಕ್ಕೆ ಸೇರಿದೆಯೋ ಆ ಸಮುದಾಯದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು;(ಜಿಲ್ಲಾವಾರು, ಸಂಘ/ಸಂಸ್ಥೆಗಳವಾರು ಮಾಹಿತಿ ನೀಡುವುದು)</td><td>ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಅನುದಾನ ಪಡೆದು ಸಂಘ-ಸಂಸ್ಥೆಗಳು ನಡೆಸುತ್ತಿರುವ ವಿದ್ಯಾರ್ಥಿ ನಿಲಯಗಳಲ್ಲಿ ಪ್ರವೇಶ ಪಡೆದಿರುವ ವಿದ್ಯಾರ್ಥಿಗಳ ಒಟ್ಟು ಸಂಖ್ಯೆ ಮತ್ತು ಆಯಾ ಸಂಘ-ಸಂಸ್ಥೆಗಳ ಸಮುದಾಯಕ್ಕೆ ಸೇರಿದ ವಿದ್ಯಾರ್ಥಿಗಳ ಸಂಖ್ಯೆಯನ್ನು ಸಂಘ-ಸಂಸ್ಥೆಗಳವಾರು ಮತ್ತು ಜಿಲ್ಲಾವಾರು ಮಾಹಿತಿಯನ್ನು ಅನುಬಂಧ-2ರಲ್ಲಿ ಒದಗಿಸಲಾಗಿದೆ.</td><td>Details about students studying in various institutions funded by Backward Classes Welfare Department has been provided institutions wise and district wise in Annexure-2</td></tr>
</table>

| | | | |
|---|---|---|---|
| ಇ) | ವಿದ್ಯಾರ್ಥಿ ನಿಲಯಗಳ ಕಟ್ಟಡ ನಿರ್ಮಾಣಕ್ಕೆ ಸರ್ಕಾರ ನೀಡಿದ ಸಹಾಯಧನ ಸದುಪಯೋಗವಾಗುತ್ತಿರುವ ಬಗ್ಗೆ ಅವಶ್ಯಕ ವಿದ್ಯಾರ್ಥಿಗಳು ವಾಸಿಸುತ್ತಿರುವ ಬಗ್ಗೆ ಯಾವ ರೀತಿಯ ತಪಾಸಣೆಗಳನ್ನು ಕೈಗೊಳ್ಳಲಾಗುತ್ತಿದೆ; | ಸರ್ಕಾರದ ಮಾರ್ಗಸೂಚಿಗಳನ್ವಯ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಅನುದಾನ ಪಡೆದು ಸಂಘ-ಸಂಸ್ಥೆಗಳು ವಿದ್ಯಾರ್ಥಿ ನಿಲಯ ಕಟ್ಟಡಗಳ ನಿರ್ಮಾಣಕ್ಕೆ ಸದ್ಬಳಕೆ ಮಾಡುತ್ತಿರುವ ಬಗ್ಗೆ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳ ಮೇಲ್ವಿಚಾರಣೆ ಮಾಡುವ ಜವಾಬ್ದಾರಿಯನ್ನು ಹೊಂದಿರುತ್ತಾರೆ. | District Backward Classes Welfare officer and Taluka Backward Classes Welfare officer have the responsibility to monitor the functioning and proper utilization of funds provided to various Backward Classes associations. |
| ಈ) | ಕೆಲವು ವಿದ್ಯಾರ್ಥಿ ನಿಲಯಗಳಲ್ಲಿ ಅತ್ಯಂತ ಕಡಿಮೆ ಸಂಖ್ಯೆಯ ವಿದ್ಯಾರ್ಥಿಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಯಾವ ಕ್ರಮ ಕೈಗೊಳ್ಳಲಾಗಿದೆ. (ವಿವರ ನೀಡುವುದು). | ಇಲ್ಲ | No |

ಆಯುಕ್ತರ ಪರವಾಗಿ
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
ಬೆಂಗಳೂರು

**ವಿಧಾನ ಸಭಾ ಸದಸ್ಯರಾದ ಶ್ರೀ ಸುರೇಶ್ ಬಾಬು, ಸಿ.ಬಿ.(ಚಿಕ್ಕನಾಯಕನಹಳ್ಳಿ),ಇವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ 295ಕ್ಕೆ ಪೂರಕ ಟಿಪ್ಪಣಿ**

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ವಿವಿಧ ಸಮುದಾಯಗಳ ಅಭಿವೃದ್ಧಿ ಕಾರ್ಯಕ್ರಮದ ರಾಜ್ಯ ವಲಯ ಯೋಜನೆ ಲೆಕ್ಕ ಶೀರ್ಷಿಕೆ 2225-03-001-0-05ರಡಿ, ಸರ್ಕಾರದ ಆದೇಶ ಸಂಖ್ಯೆ: ಹಿಂವಕ 695 ಬಿಎಂಎಸ್ 2014, (ಭಾ-2), ದಿನಾಂಕ: 05.11.2014ರ ಮಾರ್ಗಸೂಚಿಗಳನ್ವಯ ಸಮುದಾಯ ಭವನ/ವಿದ್ಯಾರ್ಥಿನಿಲಯ ಕಟ್ಟಡ ನಿರ್ಮಾಣಕ್ಕಾಗಿ ಪಟ್ಟಣ ಪಂಚಾಯಿತಿ/ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ರೂ.10.00 ಲಕ್ಷ, ತಾಲ್ಲೂಕು ಕೇಂದ್ರಸ್ಥಾನ ರೂ.25.00, ಲಕ್ಷ ಹಾಗೂ ಜಿಲ್ಲಾ ಕೇಂದ್ರಸ್ಥಾನ ರೂ.50.00 ಲಕ್ಷಗಳಂತೆ ಗರಿಷ್ಠ ಮಿತಿಯೊಳಗೊಳಪಟ್ಟು ಪ್ರವರ್ಗ-1, 2ಎ, 3ಎ, ಮತ್ತು ಪ್ರವರ್ಗ-3ಬಿಗೆ ಸೇರಿದ ಜಾತಿಗಳ ನೋಂದಾಯಿತ ಸಂಘ/ಸ್ವಯಂ ಸೇವಾಸಂಸ್ಥೆ/ಟ್ರಸ್ಟ್‌ಗಳಿಗೆ ಅನುದಾನವನ್ನು ಮಂಜೂರು ಮಾಡಲಾಗುತ್ತಿದೆ.

ಈ ಕಾರ್ಯಕ್ರಮದಡಿ ಅನುದಾನ ಸೌಲಭ್ಯ ಪಡೆಯಲು ಇಚ್ಚಿಸುವ ಸಂಸ್ಥೆಯು ಸಂಘ/ಸಂಸ್ಥೆಯು ಸರ್ಕಾರದ ನೊಂದಣಿ ಕಾಯ್ದೆ 1960ರಡಿ ಅಥವಾ ಟ್ರಸ್ಟ್ ಕಾಯ್ದೆಯಡಿಯಲ್ಲಿ ಕನಿಷ್ಠ 2ವರ್ಷ ಪೂರ್ಣಗೊಂಡರಬೇಕು, 12 ವರ್ಷಗಳ ಋಣಭಾರ ಪತ್ರ ಸಲ್ಲಿಬೇಕು, ಸಂಸ್ಥೆಯ ಹೆಸರಿನಲ್ಲಿ ನಿವೇಶನವನ್ನು ಹೊಂದಿರಬೇಕು, ಇಲ್ಲವೇ ಕನಿಷ್ಠ 30 ವರ್ಷಗಳಿಗೆ ಗುತ್ತಿಗೆ ಪಡೆದಿರಬೇಕು, ಹಿಂದಿನ 2ವರ್ಷಗಳ ಆಡಿಟ್ ವರದಿಗಳನ್ನು ಸಲ್ಲಿಸಬೇಕು, ಉದ್ದೇಶಿತ ಕಟ್ಟಡದ ಯೋಜನಾ ಅಂದಾಜು ಪಟ್ಟಿ ಮತ್ತು ನಕ್ಷೆಯನ್ನು ಸಂಬಂಧಿಸಿದ ಪ್ರಾಧಿಕಾರಿಗಳಿಂದ ಅನುಮೋದಿಸಲ್ಪಟ್ಟಿರಬೇಕು, ಅಂದಾಜು ಪಟ್ಟಿಗೆ ಸಹಾಯಕ ಕಾರ್ಯಪಾಲಕ/ಕಾರ್ಯಪಾಲಕ ಅಭಿಯಂತರರಿಂದ/ವಸ್ತುಶಿಲ್ಪಿ ಅಭಿಯಂತರರಿಂದ ಅನುಮೋದಿಸಲ್ಪಟ್ಟಿರಬೇಕು. ಈ ಸಂಬಂಧ ಪ್ರಸ್ತಾವನೆಗಳನ್ನು ಸಂಬಂಧಿಸಿದ ಜಿಲ್ಲೆಗಳ ಜಿಲ್ಲಾಧಿಕಾರಿಗಳ ಮೂಲಕ ಸಲ್ಲಿಸಬೇಕಾಗಿರುತ್ತದೆ.

2013-14ನೇ ಸಾಲಿನಲ್ಲಿ 31 ಸಂಘ ಸಂಸ್ಥೆಗಳಿಗೆ ವಿದ್ಯಾರ್ಥಿ ನಿಲಯ ಕಟ್ಟಡಗಳ ನಿರ್ಮಾಣಕ್ಕೆ ರೂ.1520 ಲಕ್ಷಗಳನ್ನು ಮಂಜೂರು ಮಾಡಿ, ರೂ.1440 ಲಕ್ಷ ಅನುದಾನವನ್ನು ಮರು ಬಿಡುಗಡೆ ಮಾಡಲಾಗಿದೆ.

2014-145ನೇ ಸಾಲಿನಲ್ಲಿ 32 ಸಂಘ ಸಂಸ್ಥೆಗಳಿಗೆ ವಿದ್ಯಾರ್ಥಿ ನಿಲಯ ಕಟ್ಟಡಗಳ ನಿರ್ಮಾಣಕ್ಕೆ ರೂ.1305.00 ಲಕ್ಷ ಅನುದಾನ ಮಂಜೂರು ಮಾಡಿ, ರೂ.707.50 ಲಕ್ಷ ಅನುದಾನವನ್ನು ಮರು ಬಿಡುಗಡೆ ಮಾಡಲಾಗಿದೆ.

2015-16ನೇ ಸಾಲಿನಲ್ಲಿ 37 ಸಂಘ-ಸಂಸ್ಥೆಗಳಿಗೆ ವಿದ್ಯಾರ್ಥಿ ನಿಲಯ ಕಟ್ಟಡಗಳ ನಿರ್ಮಾಣಕ್ಕೆ ರೂ.1656.15 ಲಕ್ಷ ಅನುದಾನ ಮಂಜೂರು ಮಾಡಿ, ರೂ.877.40 ಲಕ್ಷ ಅನುದಾನವನ್ನು ಮರು ಬಿಡುಗಡೆ ಮಾಡಲಾಗಿದೆ.

ಸರ್ಕಾರದಿಂದ ಮಂಜೂರು ಮಾಡಿ ಬಿಡುಗಡೆ ಮಾಡಲಾದ ಅನುದಾನವನ್ನು ಸಂಬಂಧಿಸಿದ ಜಿಲ್ಲಾಧಿಕಾರಿಗಳಿಗೆ ಮರು ಬಿಡುಗಡೆ ಮಾಡಲಾಗುತ್ತಿದೆ. ಸಂಸ್ಥೆಯವರು ಸರ್ಕಾರ ಅನುದಾನ ಮಂಜೂರು

ಮಾಡಿದ 3 ವರ್ಷಗಳಲ್ಲಿ ವಿದ್ಯಾರ್ಥಿ ನಿಲಯ ಕಟ್ಟಡ ನಿರ್ಮಾಣಕ್ಕೆ ಬಳಕೆ ಮಾಡಿ ಕಟ್ಟಡ ನಿರ್ಮಾಣವನ್ನು ಪೂರ್ಣಗಿಳಿಸಬೇಕಾಗಿರುತ್ತದೆ. ಈ ಅನುದಾನವನ್ನು ಉದ್ದೇಶಿತ ವಿದ್ಯಾರ್ಥಿ ನಿಲಯ ಕಟ್ಟಡ ನಿರ್ಮಾಣಕ್ಕೆ ಸದ್ಬಳಕೆ ಮಾಡುತ್ತಿರುವ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಹಾಗೂ ತಾಲ್ಲೂಕು ವಿಸ್ತರಣಾಧಿಕಾರಿಗಳು ಕಾಲ ಕಾಲಕ್ಕೆ ತಪಾಸಣೆಯನ್ನು ಮಾಡುವ ಜವಾಬ್ದಾರಿಯನ್ನು ಹೊಂದಿರುತ್ತಾರೆ.

I/c ಆಯುಕ್ತರು
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
ಬೆಂಗಳೂರು